# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 565
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 24.09.2020
4. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಡ್ರಗ್ಸ್ ಮಾಫಿಯಾದಿಂದ ಸಮಾಜದಲ್ಲಿ ಯುವ ಜನರು ಮತ್ತು ಮಕ್ಕಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದಲ್ಲಿ ಮಾದಕವಸ್ತುಗಳ ಪ್ರಕರಣಗಳು ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.</td></tr>
<tr><td>ಆ</td><td>ಬಂದಿದ್ದಲ್ಲಿ, ಸರ್ಕಾರ ಇದನ್ನು ತಡೆಗಟ್ಟಲು ಯಾವ ಕ್ರಮಗಳನ್ನು ಕೈಗೊಂಡಿದೆ;</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಈ ಕೆಳಕಂಡಂತೆ ವರದಿಯಾಗಿರುತ್ತವೆ.
<table>
<tr><th>ವರ್ಷ</th><th>ದಾಖಲಾದ ಮಾದಕ ವಸ್ತುಗಳ ಪ್ರಕರಣಗಳ ಸಂಖ್ಯೆ</th><th>ಬಂಧಿಸಿರುವ ಆರೋಪಿಗಳ ಸಂಖ್ಯೆ</th></tr>
<tr><td>2017</td><td>1126</td><td>1604</td></tr>
<tr><td>2018</td><td>1032</td><td>1470</td></tr>
<tr><td>2019</td><td>1661</td><td>2263</td></tr>
<tr><td>2020 (ಸೆಪ್ಟಂಬರ್ 15 ರವರೆಗೆ)</td><td>2589</td><td>2865</td></tr>
</table>
ಮಾದಕ ವಸ್ತುಗಳ ಪ್ರಕರಣಗಳನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು <u>ಅನುಬಂಧ</u> ದಲ್ಲಿ ನೀಡಲಾಗಿದೆ</td></tr>
<tr><td>ಇ</td><td>ಈ ಪಿಡುಗಿನಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿದ್ದರೂ, ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಳ್ಳದಿರಲು ಕಾರಣವೇನು; ಇನ್ನಾದರೂ ಗಂಭೀರವಾಗಿ ಪರಿಗಣಿಸುವುದೇ?</td><td>ಸಮಾಜದ ಸ್ವಾಸ್ಥ್ಯ ಕಾಪಾಡುವ ಸಲುವಾಗಿ ಸರ್ಕಾರವು ಮಾದಕ ವಸ್ತುಗಳ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಇದರ ನಿಯಂತ್ರಣಕ್ಕಾಗಿ ರಾಜ್ಯದ ಪ್ರತಿ ಜಿಲ್ಲೆ ಹಾಗೂ ನಗರಗಳಲ್ಲಿ ವಿಶೇಷ ಸೈಬರ್, ನಾರ್ಕೋಟಿಕ್ ಎಕ್ನಾಮಿಕ್ ಪೊಲೀಸ್‌ಗಳನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಇಂತಹ ಒಟ್ಟು 46 ಪೊಲೀಸ್ ಠಾಣೆಗಳು ಹಾಗೂ ಇವುಗಳ ಪೈಕಿ ಬೆಂಗಳೂರು ನಗರದಲ್ಲಿ ಮಾತ್ರ 8 ವಿಶೇಷ ಪೊಲೀಸ್ ಠಾಣೆಗಳು ಪ್ರತಿ ವಿಭಾಗಕ್ಕೆ ಒಂದರಂತೆ ಕಾರ್ಯ ನಿರ್ವಹಿಸುತ್ತಿದೆ. ಅಲ್ಲದೆ ಆಂತರಿಕ ಭದ್ರತಾ ವಿಭಾಗದಿಂದಲೂ ಮಾದಕ ವಸ್ತುಗಳ ಪ್ರಕರಣಗಳನ್ನು ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.</td></tr>
</table>

ಒಇ 23 ಪಿಎನ್‌ಡಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು

## ಅನುಬಂಧ

**ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ, ಸಾಗಣೆ ಮತ್ತು ಸೇವನೆಯನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಸಹ ಕೈಗೊಂಡಿರುತ್ತದೆ**

1. ರಾಜ್ಯದಲ್ಲಿ ಮಾದಕ ಪದಾರ್ಥಗಳ ವಿರುದ್ಧ ಹೆಚ್ಚು ಹೆಚ್ಚು ಪ್ರಕರಣಗಳನ್ನು ದಾಖಲಿಸಿ ಸಂಬಂಧಿಸಿದವರ ಮೇಲೆ ಎನ್.ಡಿ.ಪಿ.ಎಸ್ ಕಾಯ್ದೆ ಅನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.

2. ವಿದ್ಯಾರ್ಥಿಗಳು ಮತ್ತು ಯುವ ಸಮೂಹವು ಮಾದಕ ವಸ್ತುಗಳ ದುಷ್ಚಟಕ್ಕೆ ಬಲಿಯಾಗದಂತೆ ಶಾಲಾ ಕಾಲೇಜುಗಳ ಬಳಿ ಗಸ್ತು ವಾಹನಗಳಿಂದ ವಿಶೇಷವಾಗಿ ಗಸ್ತು ನಡೆಸಿ ಸ್ಥಳೀಯ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಆಯಾ ಶಾಖೆಗಳಿಗೆ ಹೋಗಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಹಾಗೂ ಮಾದಕ ವಸ್ತು ಸಾಗಣೆ ಹಾಗೂ ಮಾರಾಟ ಮಾಡುವವರ ವಿರುದ್ಧ ನಿಗಾ ವಹಿಸಲಾಗುತ್ತಿದೆ.

3. ಸರ್ಕಾರದ ಆದೇಶ ಸಂಖ್ಯೆ: ಒಇ 16 ಪಿಎನ್‌ಡಿ 2018, ದಿನಾಂಕ: 27.08.2018 ರನ್ವಯ ಶಾಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ಹಂತದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಸಾಗಣೆ ತಡೆಗಟ್ಟಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಿ ಕರ್ತವ್ಯ ನಿಗಧಿಪಡಿಸಲಾಗಿದೆ.

4. ಜನ ಸಾಮಾನ್ಯರಲ್ಲಿ ಮಾದಕ ವಸ್ತುಗಳ ವಿರುದ್ಧ ಅರಿವು ಮೂಡಿಸುವ ಸಲುವಾಗಿ ಬಿತ್ತಿ ಪತ್ರಗಳನ್ನು, ಸಿನಿಮಾ ಮಂದಿರಗಳಲ್ಲಿ ಸ್ಲೈಡ್ ಶೋ, ಸುದ್ದಿ ಮಾಧ್ಯಮಗಳಲ್ಲಿ ಮಾದಕ ವಸ್ತುಗಳ ಬಳಕೆ ವಿರುದ್ಧ ಸಂದೇಶಗಳನ್ನು ಪ್ರಕಟಿಸುವುದು, ಹೀಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ.

5. 2015ನೇ ಸಾಲಿನಲ್ಲಿ ಒಬ್ಬ ಅಪರಾಧಿ, 2018 ರಲ್ಲಿ ಮೂವರು ಅಪರಾಧಿಗಳ ಮೇಲೆ ಮಾದಕ ವಸ್ತುಗಳ ಬಳಕೆ ಹಾಗೂ ಸಾಗಾಣಿಕೆ ಪ್ರಕರಣಗಳಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆಯ ಜೊತೆಗೆ ಗೂಂಡಾ ಕಾಯ್ದೆಯನ್ನು ಚಲಾಯಿಸಿ ಕ್ರಮ ಕೈಗೊಳ್ಳಲಾಗಿದೆ.

6. ವಿಶ್ವ ಸಂಸ್ಥೆಯ ನಿರ್ದೇಶನದನ್ವಯ ಪ್ರತಿ ವರ್ಷ ಆಗಸ್ಟ್ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ ಮಾದಕ ವಸ್ತುಗಳ ಮಾರಾಟ ಮತ್ತು ಸಾಗಣೆಯನ್ನು ತಡೆಗಟ್ಟಲು ರಾಜ್ಯಾದ್ಯಂತ ವಿಶೇಷ ಕಾರ್ಯಚರಣೆ ಕೈಗೊಳ್ಳಲಾಗುತ್ತಿದೆ. ಈ ಅವಧಿಯಲ್ಲಿ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದೈಹಿಕ/ ಆರ್ಥಿಕ/ ಸಾಮಾಜಿಕ ದುಷ್ಪರಿಣಾಮಗಳ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

7. ಘನ ಸರ್ವೋಚ್ಚ ನ್ಯಾಯಾಲಯದ ಅಪರಾಧಿಕ ಮೇಲ್ಮನವಿ ಸಂಖ್ಯೆ: 652/2012ರಲ್ಲಿ ದಿನಾಂಕ 28/01/2016ರ ಆದೇಶದನ್ವಯ ಡಿ.ಜಿ. & ಐ.ಜಿ.ಪಿ ರವರ ಕಛೇರಿ ಜ್ಞಾಪನ ಸಂಖ್ಯೆ: ಅಪರಾಧ-6/29/ಎಸ್.ಎಂ.ಎಸ್/2016, ದಿನಾಂಕ: 25/04/2016 ರಲ್ಲಿ ಮಾದಕ ವಸ್ತುಗಳ ಜಪ್ತಿ, ಸಂಗ್ರಹಣೆ ಮತ್ತು ವಿಲೇವಾರಿ ಕುರಿತು ಕೈಗೊಳ್ಳಬೇಕಾದ ಕ್ರಮಗಳ ವಿವರಗಳನ್ನು ಎಲ್ಲಾ ಘಟಕಾಧಿಕಾರಿಗಳಿಗೆ ನೀಡಲಾಗಿದೆ.

8. ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್.ಡಿ. 01 ಪಿಎನ್‌ಡಿ 2019, ದಿನಾಂಕ: 30/01/2020 ರಲ್ಲಿ ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಮತ್ತು ವಲಯ ಪೊಲೀಸ್ ಮಹಾ ನಿರೀಕ್ಷಕರುಗಳಿಗೆ ಪಿ.ಐ.ಟಿ. ಎನ್.ಡಿ.ಪಿ.ಎಸ್. ಕಾಯ್ದೆ, 1988ರ ಕಲಂ 3(1)ರಡಿಯಲ್ಲಿ ಮುಂಜಾಗ್ರತ ಕ್ರಮವಾಗಿ ರೂಢಿಗತ ಅಪರಾಧಿಗಳನ್ನು ಬಂಧಿಸಲು ಅಧಿಕಾರ ನೀಡಲಾಗಿದೆ.